## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ತಾಂತ್ರಿಕ ಸಲಹಾ ಸಮಿತಿ (TAP) ಮತ್ತು ಇ-ಆಡಳಿತಕ್ಕೆ ಸಂಬಂಧಿಸಿದ ಇತರೆ ಸಮಿತಿಗಳ ಸಭೆಗಳಿಗೆ ಹಾಜರಾದ ಸಂದರ್ಭಗಳಲ್ಲಿ ಉಪಸ್ಥಿತಿ ಭತ್ಯೆ ನೀಡುವ ಬಗ್ಗೆ.

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 101 ಇಆಇ 2004, ದಿನಾಂಕ: 04-08-2005.
2. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 8 ಇಆಇ 2007, ದಿನಾಂಕ: 11-04-2007.
3. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 15 ಇಆಇ 2013 ದಿನಾಂಕ:30-03-2013.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಇವರ ಅಧ್ಯಕ್ಷತೆಯಲ್ಲಿ ದಿನಾಂಕ: 08-7-2019 ರಂದು ನಡೆದ ರಾಜ್ಯ ಮಟ್ಟದ ತಾಂತ್ರಿಕ ಸಲಹಾ ಸಮಿತಿ ಸಭೆಯ ನಡವಳಿಗಳು.

*****

**ಪ್ರಸ್ತಾವನೆ:**

ಮೇಲೆ (1) ರಲ್ಲಿ ಓದಲಾದ ದಿನಾಂಕ:04-08-2005 ಆದೇಶದಲ್ಲಿ ಈ ಕೆಳಕಂಡಂತೆ ಮಂಜೂರಾತಿ ನೀಡಲಾಗಿದೆ:

> "to accord sanction to enhance the existing sitting fee of Rs.400.00 to Rs.500.00 for technical experts attending meetings of departmental Technical Advisory Panels and the State Technical Advisory Panel".

ಮೇಲೆ ಓದಲಾದ (2)ರ ದಿನಾಂಕ:11-04-2007 ರ ಆದೇಶದಲ್ಲಿ ಇ-ಆಡಳಿತ ಯೋಜನೆಗಳಿಗೆ ಸಂಬಂಧಿಸಿದಂತೆ, ಯಾವುದೇ ತಾಂತ್ರಿಕ ಸಲಹೆ ಇತ್ಯಾದಿ ಪಡೆಯುವ ಸಲುವಾಗಿ ತಾಂತ್ರಿಕ ಸಲಹಾ ಸಮಿತಿ (TAP) ಸದಸ್ಯರ ಸೇವೆಯನ್ನು ಟೆಂಡರ್ ಪರಿಶೀಲನಾ ಸಮಿತಿ ಅಥವಾ ಇತರೇ ಸಮಿತಿಗಳಲ್ಲಿ ವಿಶೇಷ ಆಹ್ವಾನಿತರಾಗಿ ಅಥವಾ ಸದಸ್ಯರಾಗಿ ಪಡೆದಲ್ಲಿ ಪ್ರತಿ ಸಭೆಗೆ ರೂ. 500.00 ಉಪಸ್ಥಿತಿ ಭತ್ಯೆಯನ್ನು ಸದರಿ ಸದಸ್ಯರಿಗೆ ನೀಡಲು ಸರ್ಕಾರ ಅನುಮತಿ ನೀಡಿದೆ. ಇದಲ್ಲದೆ, ತಾಂತ್ರಿಕ ಸಲಹಾ ಸಮಿತಿ (TAP) ಸಭೆಗೆ ಹಾಜರಾಗುವ ಸದಸ್ಯರಿಗೆ ಉಪಸ್ಥಿತಿ ಭತ್ಯೆಯನ್ನು ರೂ.500/-ನ್ನು ನೀಡಲು ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ದಿನಾಂಕ: 30-03-2013 ರ ಆದೇಶದಲ್ಲಿ ದಿನಾಂಕ:04-08-2005 ಮತ್ತು 11-04-2007 ಸರ್ಕಾರಿ ಆದೇಶಗಳನ್ನು ರದ್ದುಪಡಿಸುತ್ತಾ, ಇ-ಆಡಳಿತ ಯೋಜನೆಗಳಿಗೆ ಸಂಬಂಧಿಸಿದಂತೆ ತಾಂತ್ರಿಕ ಸಲಹೆ ಇತ್ಯಾದಿ ಪಡೆಯುವ ಸಲುವಾಗಿ ರಚಿಸಲಾದ ಸಮಿತಿಗಳಿಗೆ ಸದಸ್ಯರಾಗಿ ನಾಮ ನಿರ್ದೇಶಿತವಾದ ತಾಂತ್ರಿಕ ತಜ್ಞರ ಸೇವೆಯನ್ನು ಅಂತಹ ಸಮಿತಿಗಳಾದ ರಾಜ್ಯ ಮಟ್ಟದ ಮತ್ತು ಇಲಾಖಾ ತಾಂತ್ರಿಕ ಸಲಹಾ ಸಮಿತಿಗಳಿಗೆ, ಟೆಂಡರ್ ಪರಿಶೀಲನಾ ಸಮಿತಿ ಅಥವಾ ಇತರೇ ಸಮಿತಿಗಳಲ್ಲಿ ವಿಶೇಷ ಆಹ್ವಾನಿತರಾಗಿ

ಅಥವಾ ಸದಸ್ಯರಾಗಿ ಪಡೆದಲ್ಲಿ , ಪ್ರತಿ ಸಭೆಗೆ ರೂ. 1000.00 ಉಪಸ್ಥಿತಿ ಭತ್ಯೆಯನ್ನು ಸದರಿ ಸದಸ್ಯರಿಗೆ ಮಂಜೂರಾತಿ ನೀಡಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (4)ರ ದಿನಾಂಕ: 08-07-2019 ರಂದು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಇವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಈ ಕೆಳಕಂಡಂತೆ ನಿರ್ಣಯ ತೆಗೆದುಕೊಳ್ಳಲಾಗಿದೆ:

" ತಾಂತ್ರಿಕಾ ಸಲಹಾ ಸಮಿತಿ ಮತ್ತು ಇ -ಆಡಳಿತಕ್ಕೆ ಸಂಬಂಧಿಸಿದ ಇತರೆ ಸಮಿತಿಗಳ ಸಭೆಗಳಿಗೆ ಹಾಜರಾಗುವ ಸಂದರ್ಭಗಳಲ್ಲಿ ತಾಂತ್ರಿಕ ತಜ್ಞರಿಗೆ 2500.00 ರೂಪಾಯಿಗಳ ಉಪಸ್ಥಿತಿ ಭತ್ಯೆಯನ್ನು ಹೆಚ್ಚಿಸಲು ಅನುಮೋದನೆ ನೀಡಿತು"

ಆದ್ದರಿಂದ, ಇ-ಆಡಳಿತ ಯೋಜನೆಗಳಿಗೆ ಸಂಬಂಧಿಸಿದ ತಾಂತ್ರಿಕ ಸಲಹಾ ಸಮಿತಿ ಮತ್ತು ಇ -ಆಡಳಿತಕ್ಕೆ ಸಂಬಂಧಿಸಿದ ಇತರೆ ಸಮಿತಿಗಳ ಸಭೆಗಳಿಗೆ ಹಾಜರಾದ ತಾಂತ್ರಿಕ ಸದಸ್ಯರುಗಳಿಗೆ ಉಪಸ್ಥಿತಿ ಭತ್ಯೆಯನ್ನು ರೂ.1000.00 ರಿಂದ ರೂ.2500.00 ಕ್ಕೆ ಹೆಚ್ಚಿಸಲು ಸರ್ಕಾರವು ನಿರ್ಧರಿಸಿರುವ ಕಾರಣ ಈ ಆದೇಶ

**<u>ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 50 ಇಆಇ 2019</u>**

**<u>ಬೆಂಗಳೂರು, ದಿನಾಂಕ:16 ನೇ ಡಿಸೆಂಬರ್ 2019</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಮೇರೆಗೆ, ಇ-ಆಡಳಿತ ಯೋಜನೆಗಳಿಗೆ ಸಂಬಂಧಿಸಿದ ತಾಂತ್ರಿಕ ಸಲಹಾ ಸಮಿತಿ ಮತ್ತು ಇ -ಆಡಳಿತಕ್ಕೆ ಸಂಬಂಧಿಸಿದ ಇತರೆ ಸಮಿತಿಗಳ ಸಭೆಗಳಿಗೆ ಹಾಜರಾದ ತಾಂತ್ರಿಕ ಸದಸ್ಯರುಗಳಿಗೆ ಉಪಸ್ಥಿತಿ ಭತ್ಯೆಯನ್ನು ರೂ. 1000.00 ರಿಂದ ರೂ.2500.00 ಕ್ಕೆ ಹೆಚ್ಚಿಸಿ ಸರ್ಕಾರವು ಆದೇಶಿಸಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ/ವೆಚ್ಚ-12/2019(ಇ-ಆಫೀಸ್) ದಿನಾಂಕ: 24-10-2019 ರ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ
(ವೀರಭದ್ರ) 16-12-19
ಪೀಠಾಧಿಕಾರಿ-1
ಸಿಆಸುಇ (ಇ-ಆಡಳಿತ)

ಗೆ,

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು – ಈ ಆದೇಶವನ್ನು ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಿ ಅದರ 50 ಪ್ರತಿಗಳನ್ನು ಈ ಇಲಾಖೆಗೆ ಒದಗಿಸಲು ಕೋರಲಾಗಿದೆ.

ಪ್ರತಿ:

1) ಪ್ರಧಾನ ಮಹಾಲೇಖಪಾಲರು (ಜಿ & ಎಸ್‌ಎಸ್‌ಎ) / (ಇಆರ್ & ಎಸ್‌ಎ) ಆಡಿಟ್ ಭವನ, ಹೊಸ ಕಟ್ಟಡ, ಅಂಚೆ ಪೆಟ್ಟಿಗೆ ಸಂಖ್ಯೆ5398, ಬೆಂಗಳೂರು.

2) ಪ್ರಧಾನ ಮಹಾಲೇಖಪಾಲರು (ಎ & ಇ) ಮುಖ್ಯ ಕಟ್ಟಡ, ಬೆಂಗಳೂರು-01.
3) ಎಲ್ಲಾ ಇಲಾಖೆಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ, ವಿಧಾನ ಸೌಧ, ವಿಕಾಸ ಸೌಧ, ಬಹುಮಹಡಿಗಳ ಕಟ್ಟಡ ಮತ್ತು ವಿ.ವಿ ಗೋಪುರ, ಬೆಂಗಳೂರು
4) ಸರ್ಕಾರದ ಉಪಕಾರ್ಯದರ್ಶಿ ಹಾಗೂ ಆಂತರಿಕ ಆರ್ಥಿಕ ಸಲಹೆಗಾರರು, ವಸತಿ, ನಗರಾಭಿವೃದ್ಧಿ ಕಾನೂನು ಇಲಾಖೆ ಮತ್ತು ಸಿಆಸುಇ (ಇ-ಆಡಳಿತ) ಬಹುಮಹಡಿ ಕಟ್ಟಡ.
5) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-12) ವಿಧಾನ ಸೌಧ, ಬೆಂಗಳೂರು.
6) ಖಜಾನಾಧಿಕಾರಿಗಳು, ಕೆ.ಆರ್ ವೃತ್ತ, ಬೆಂಗಳೂರು.
7) ಎಲ್ಲಾ ಇಲಾಖೆಗಳ ತಾಂತ್ರಿಕ ಸಲಹಾ ಸಮಿತಿಯ ಸದಸ್ಯರುಗಳಿಗೆ – ಆಯಾಯ ಇಲಾಖೆಯ ಸಮನ್ವಯ ಶಾಖೆಗಳ ಮುಖಾಂತರ
8) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು
9) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಿಆಸುಇ (ಇ-ಆಡಳಿತ)ಬಹುಮಹಡಿಗಳ ಕಟ್ಟಡ, ಬೆಂಗಳೂರು.
10) ಸರ್ಕಾರದ ಜಂಟಿ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಸಿಆಸುಇ (ಇ-ಆಡಳಿತ), ಬಹುಮಹಡಿಗಳ ಕಟ್ಟಡ, ಬೆಂಗಳೂರು.
11) ವೆಬ್-ಪೋರ್ಟಲ್ ನಲ್ಲಿ ಪ್ರಕಟಿಸಲು – ಪೀಠಾಧಿಕಾರಿ-1 ಸಿಆಸುಇ (ಇ-ಆಡಳಿತ).
12) ಶಾಖಾ ರಕ್ಷಾ ಕಡತ.